**ಕರ್ನಾಟಕ ಸರ್ಕಾರ**

ಸಂ.ಡಿಟಿಇ 01 ಎಸ್‌ಸಿಹೆಚ್(1) 2013-14

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 31-08-2013.

**-:: ಸುತ್ತೋಲೆ ::-**

**ವಿಷಯ:-** ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಸಿ.ಇ.ಟಿ ಮುಖಾಂತರ ಪ್ರವೇಶ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರಥಮ ವರ್ಷದಲ್ಲಿ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ, ಮುಂದಿನ ತರಗತಿಯಲ್ಲಿ ಮುಂದುವರಿಸುತ್ತ ಮತ್ತು ವ್ಯಾಸಂಗವನ್ನು ಪೂರ್ಣಗೊಳಿಸಿರುವ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರುವ ವಿದ್ಯಾರ್ಥಿಗಳಿಗೆ 2013-14ನೇ ಸಾಲಿನ ಅರ್ಜಿಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:-**
1. ಈ ಕಛೇರಿಯ ಇದೇ ಸಮಸಂಖ್ಯೆ ಸುತ್ತೋಲೆಯ ದಿನಾಂಕ:07-08-2013
2. ಸರ್ಕಾರದ ಆದೇಶ ಸಂಖ್ಯೆ: ಇಡಿ 37 ಹೆಚ್‌ಪಿಟಿ 2012, ದಿ: 21-08-2013.
3. ಈ ಕಛೇರಿಯ ಇದೇ ಸಮಸಂಖ್ಯೆ ಸುತ್ತೋಲೆಯ ದಿನಾಂಕ:23-08-2013

***********

2013-14ನೇ ಸಾಲಿನಲ್ಲಿ ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಸರ್ಕಾರಿ ಕೋಟಾದಡಿ ಪ್ರವೇಶ ಪಡೆದ ಪ್ರಥಮ ವರ್ಷ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ, ಮುಂದಿನ ತರಗತಿಯಲ್ಲಿ ಮುಂದುವರಿಸುತ್ತ ಮತ್ತು ವ್ಯಾಸಂಗವನ್ನು ಪೂರ್ಣಗೊಳಿಸಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರುವ ವಿದ್ಯಾರ್ಥಿಗಳು ಬೋಧನಾ ಶುಲ್ಕ ವಿನಾಯಿತಿಗಾಗಿ ಅರ್ಜಿಗಳನ್ನು ಉಲ್ಲೇಖ(1)ರ ಈ ಕಛೇರಿ ಪತ್ರದಲ್ಲಿ ದಿನಾಂಕ:07-08-2013ರಲ್ಲಿ ಈಗಾಗಲೇ ಸಲ್ಲಿಸುವಂತೆ ತಿಳಿಸಲಾಗಿದ್ದು, ಹಾಗೂ ಮತ್ತೊಮ್ಮೆ ಉಲ್ಲೇಖ(3)ರ ದಿ:23-08-2013ರ ಸುತೋಲೆಯಲ್ಲಿ ದಿನಾಂಕ: **10-09-2013**ರಂದು ಈ ಕಛೇರಿಗೆ ತುರ್ತಾಗಿ ಸಲ್ಲಿಸುವಂತೆ ಸುತ್ತೋಲೆಯನ್ನು ಹೊರಡಿಸಲಾಗಿದೆ,

ಉಲ್ಲೇಖ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿನ ಶುಲ್ಕ ಮರುಪಾವತಿಯನ್ನು ಸಹ 2013 ಸೆಪ್ಟಂಬರ್ ಮಾಹೆಯೊಳಗೆ ಪಾವತಿಸಿ ಸರ್ಕಾರಕ್ಕೆ ಕ್ರೋಢೀಕೃತ ವರದಿ ಸಲ್ಲಿಸುವುದು ಎಂದು ತಿಳಿಸಿರುವ ಹಿನ್ನೆಲೆಯಲ್ಲಿ ದಿನಾಂಕ:02-09-2013ರಂದು ಪ್ರಾರಂಭವಾಗಲಿರುವ 2013-14ನೇ ಸಾಲಿನ ಕಾಮೇಡ್-ಕೆ ಹಾಗೂ ಆಡಳಿತ ಮಂಡಳಿ ಕೋಟಾದಡಿ ಪ್ರಥಮ ಬಿ.ಇ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯ ಸಮಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಬೋಧನಾ ಶುಲ್ಕದ ವಿನಾಯಿತಿಗಾಗಿ ಅರ್ಜಿ ಸಲ್ಲಿಸಿರುವುದನ್ನು ಕ್ರೋಢೀಕರಿಸಿ, ನಿರ್ದೇಶನಾಲಯಕ್ಕೆ ಅರ್ಜಿ ಮತ್ತು ಪ್ರಸ್ತಾವನೆಯನ್ನು ಮುದ್ದಾಂ ಮೂಲಕ ಸಲ್ಲಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು

**ಇವರಿಗೆ,**

1. ರಾಜ್ಯದ ಎಲ್ಲಾ ಪ್ರಾಂಶುಪಾಲರಿಗೆ, ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳಿಗೆ ಮತ್ತು ಪಾಲಿಟೆಕ್ನಿಕ್‌ಗಳಿಗೆ.
2. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.

01_SCH(01)_13-14(Sc_St)